ಖಂಡ 1 ಇತ್ಯಾದಿ

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಮಯಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಮಯ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ಸಿ. ನಾಣಯ್ಯ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಉಪಾಧ್ಯಕ್ಷರೆ, 1997ರ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ, "1997ರ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಉಪಾಧ್ಯಕ್ಷರು : ವಿರೋಧ ಪಕ್ಷದ ನಾಯಕರಾದ ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆಯವರು ಮಾತನಾಡಿದ ಸಂದರ್ಭದಲ್ಲಿ 'ಪ್ರಧಾನಮಂತ್ರಿಯವರಿಗೆ ಖುಷಿಯಾಗುತ್ತದೆಂದು' ಎಂಬ ಪದವನ್ನು ಏನು ಬಳಸಿದ್ದಾರೆ, ಅದನ್ನು ಕಡತದಿಂದ ತೆಗೆದುಹಾಕಲಾಗಿದೆ.

6.00 ಪಿ.ಎಂ

ಕರ್ನಾಟಕ ವಿಧಾನ ಮಂಡಲದ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 1997

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಎಂ. ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಉಪಾಧ್ಯಕ್ಷರೆ, 1997ರ ಕರ್ನಾಟಕ ವಿಧಾನ ಮಂಡಲದ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು.

ಶ್ರೀ ಎಂ. ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾ ಉಪಾಧ್ಯಕ್ಷರೆ, ಈ ವಿಧೇಯಕವೂ ಬಹಳ ಸರಳವಾಗಿರುವ ವಿಧೇಯಕವಾಗಿದೆ. ಮಾ ಶಾಸಕರುಗಳ್ಯಾರಿದ್ದಾರೆ ಅವರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ವರ್ಷದ ಹನ್ನೆರಡು ಬಾರಿ ಮಾತ್ರ ಓಡಾಡಲು ಪ್ರಯಾಣ, ಮಾಡಲು ಅವಕಾಶವಿದೆ. ಹಾಲಿ ಶಾಸನಸಭೆ ಸದಸ್ಯರುಗಳಿಗೆ ಯಾವ ರೀತಿಯಲ್ಲಿ ಕೆ.ಎಸ್.ಆರ್.ಟಿ.ಸಿ. ಯಲ್ಲಿ ಉಚಿತವಾಗಿ ಪ್ರಯಾಣ ಮಾಡೇ ಅವಕಾಶವಿದೆಯೋ ಅದೇ ರೀತಿ ಮಾಜಿ ಶಾಸಕರುಗಳಿಗೆಲ್ಲಾ ಸೌಲಭ್ಯವನ್ನು ಒದಗಿಸಿಕೊಡುವ ಬ ನೀವೆಲ್ಲರೂ ಒತ್ತಾಯವನ್ನು ತಂದಮೇಲೆ, ಅದರ ಬಗ್ಗೆ ಸರ್ಕಾರ ಪರ್ಯಾಲೋಚನೆ ಮಾಡಿ ಈ ವಿಧೇಯಕವನ್ನು ತಂದಿದ್ದೇವೆ. ಈ ವಿಧೇಯಕವನ್ನು ತಾವುಗಳು ಅಪಸ್ವರವೆತ್ತುವುದಿಲ್ಲವೆಂದು ನಂಬಿರುತ್ತೇನೆ ತಾವು ಇದನ್ನು ಸ್ವಾಗತಿಸಿ ಇದಕ್ಕೆ ಅಂಗೀಕಾರವನ್ನು ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ "1997ರ ಕರ್ನಾಟಕ ವಿಧಾನ ಮಂಡಲದ ವೇತನಗಳು ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಉಪಾಧ್ಯಕ್ಷರು :"ಖಂಡ 2 ಮತ್ತು 3 ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದ

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ಸಿ. ನಾಣಯ್ಯ (ಕಾನೂನು, ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ ಉಪಾಧ್ಯಕ್ಷರೆ, 1997ರ ಕರ್ನಾಟಕ ವಿಧಾನ ಮಂಡಲದ ವೇತನಗಳು, ನಿವೃತ್ತಿ ವೇತನಗಳು ಮತ್ತ ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ "1997ರ ಕರ್ನಾಟಕ ವಿಧಾನ ಮಂಡಲದ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಮಂತ್ರಿಗಳ ಹೇಳಿಕೆ

ಬೆಂಗಳೂರು ಗ್ರಾಮಾಂತರ ಮತ್ತು ನಗರ ಜಿಲ್ಲೆಗಳಲ್ಲಿ ಸರ್ಕಾರಿ ಭೂಮಿಯನ್ನು ಅಧಿಕಾರಿಗಳು ಆಕ್ರಮಿಸಿಕೊಂಡಿರುವ ಬಗ್ಗೆ.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಉಪಾಧ್ಯಕ್ಷರೆ, ಬೆಂಗಳೂರು ಗ್ರಾಮಾಂತರ ಮತ್ತು ನಗರ ಜಿಲ್ಲೆಗಳಲ್ಲಿ ಸರ್ಕಾರಿ ಭೂಮಿಯನ್ನು ಅಧಿಕಾರಿಗಳು ಅಕ್ರಮಿಸಿಕೊಂಡಿರುವ ಬಗ್ಗೆ ನಿನ್ನೆ ವಿಷಯವನ್ನು ಎತ್ತಿದೆ, ಅದಕ್ಕೆ ಮಾನ್ಯ ಕಂದಾಯ ಸಚಿವರು ಸ್ಟೇಟ್‌ಮೆಂಟ್ ಮಾಡಬೇಕು.

ಉಪಾಧ್ಯಕ್ಷರು : ಈಗ ಸ್ಟೇಟ್‌ಮೆಂಟ್ ಮಾಡುತ್ತಾರೆ.

+ಶ್ರೀ ರಮೇಶ್ ಸಿ ಜಿಗಜಿಣಗಿ (ಕಂದಾಯ ಸಚಿವರು) :

ಬೆಂಗಳೂರು ನಗರ ಜಿಲ್ಲೆ:

ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಅತ್ಯಂತ ಬೆಲೆ ಬಾಳುವ ಸರ್ಕಾರಿ ಭೂಮಿಗಳಾದ ಗೋಮಾಳ, ಹುಲ್ಲುಬನಿ, ಖರಾಬು, ಕೆರೆ ಅಂಗಳ, ಗುಂಡುತೋಪು, ಸ್ಮಶಾನ ಮುಂತಾದ ಭೂಮಿಗಳಿಗೆ ಕೆಲವು ಆಸಕ್ತಿಯ ಕೆಳಮಟ್ಟದ ಕಂದಾಯ ನೌಕರರ ಸಹಾಯದಿಂದ ಹಾಗೂ ಅಕ್ರಮ ದಾಖಲೆಗಳನ್ನು ಸೃಷ್ಟಿಸುವ ಮೂಲಕ ಸರ್ಕಾರದ ಭೂಮಿಗಳನ್ನು ಇಂತಹ ಬೋಗಸ್ ದಾಖಲೆಗಳ ಸಹಾಯದಿಂದ ನೋಂದಣಿ, ಜೆ.ಪಿ.ಎ. ಮುಖಾಂತರ ಅಕ್ರಮವಾಗಿ ಹೊಂದಿರುವುದನ್ನು ತಡೆಗಟ್ಟಲು ಹಾಗೂ ಇಂತಹ ಅಕ್ರಮ ದಾಖಲೆಗಳನ್ನು ಪತ್ತೆ ಹಚ್ಚಿ ಭೂಕಂದಾಯದ ಕಾಯ್ದೆ 1964ರ ಕಲಂ 136 (3) ರಡಿಯಲ್ಲಿ ಅಕ್ರಮ ದಾಖಲೆಗಳನ್ನು ರದ್ದುಪಡಿಸಿ ಸರ್ಕಾರದ ವಶಕ್ಕೆ ಪಡೆಯಲು ಒಂದು ಉಪ ವಿಭಾಗಾಧಿಕಾರಿಗಳ ಮಟ್ಟದ ಅಧಿಕಾರಿಗಳನ್ನೊಳಗೊಂಡ ಐದು ತನಿಖಾಧಿಕಾರಿಗಳ ತಂಡವನ್ನು ಪ್ರತಿ ತಾಲ್ಲೂಕುವಾರು ನೇಮಿಸಿದ್ದು, ಬೆಂಗಳೂರು ನಗರ ಜಿಲ್ಲೆಯಲ್ಲಿನ ಎಲ್ಲಾ ಸರ್ಕಾರಿ ಭೂಮಿಗಳನ್ನು ಖುದ್ದು ಸ್ಥಳ ತನಿಖೆ ಮಾಡಿ ಅಕ್ರಮ ದಾಖಲಾತಿಗಳನ್ನು ಪತ್ತೆ ಹಚ್ಚಲು ಹಾಗೂ ಸಂಬಂಧಿಸಿದ ಬೋಗಸ್ ದಾಖಲೆಗಳನ್ನು ಹೊಂದಿದ್ದವರ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಲು ಈ ತನಿಖಾ ತಂಡಕ್ಕೆ ಅಧಿಕಾರ ನೀಡಲಾಗಿರುತ್ತದೆ.

ಅದರಂತೆ ಈವರೆಗೆ ಒಟ್ಟು 103 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದ್ದು, 1997 ಜನವರಿ ಮಾಹೆಯ ಅಂತ್ಯದವರೆಗೆ ಸಾಧಿಸಿದ ಪ್ರಗತಿಯ ವಿವರ ಕೆಳಕಂಡಂತೆ ಇರುತ್ತದೆ.